RNU AIR DHARWAD

# NOVEMBER 2,2024
# ALL INDIA RADIO- DHARWAD
# PRADESH SAMACHARA (KANNADA) 12PM

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ವಿವೇಕಾದಿತ್ಯ ಕನಿಯಾಲ**

<><><>

**ಕರ್ನಾಟಕದಲ್ಲಿ ಸಿದ್ಧಪಡಿಸುವ ಉತ್ಪನ್ನಗಳ ಮೇಲೆ, ಕನ್ನಡ ಭಾಷೆಯಲ್ಲಿ ಸಹ ಮಾಹಿತಿ ಇರಬೇಕೆಂಬ ಮಹತ್ವದ ಚಿಂತನೆ ನಡೆಸಲಾಗಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನ ವಿಧಾನಸೌಧದ ಎದುರು ಆಯೋಜಿತ, 69ನೇ ಕನ್ನಡ ರಾಜ್ಯೋತ್ಸವ ಹಾಗೂ ಕರ್ನಾಟಕ ನಾಮಕರಣದ, ಸುವರ್ಣ ಮಹೋತ್ಸವ ಸಂಭ್ರಮದ ಹಿನ್ನೆಲೆ, 169 ಜನ ವಿವಿಧ ಕ್ಷೇತ್ರಗಳ ಸಾಧಕರಿಗೆ, ಗಣ್ಯರೊಂದಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಿ, ಅವರು ಮಾತನಾಡಿದರು. ಮೈಸೂರು ಜಿಲ್ಲಾಧಿಕಾರಿಯವರ ಹಳೆಯ, ಅಠಾರ ಕಚೇರಿಯನ್ನು, ಕನ್ನಡ ವಸ್ತುಸಂಗ್ರಹಾಲಯವಾಗಿಸಲು, ಯೋಜಿಸಲಾಗಿದೆ ಎಂದು, ಮುಖ್ಯಮಂತ್ರಿ ಪ್ರಕಟಿಸಿದರು.**

<><><>

**ಕರ್ನಾಟಕದ ಅನುಕರಣೀಯ ಸಂಸ್ಕೃತಿ ಮತ್ತು ಮಾದರಿ ಸಂಪ್ರದಾಯಗಳಿಗೆ, ರಾಜ್ಯೋತ್ಸವ ಮನ್ನಣೆ ಎಂದು, ಪ್ರಧಾನಮಂತ್ರಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಕರ್ನಾಟಕ ಮಹಾನ್ ವ್ಯಕ್ತಿಗಳನ್ನು ಪಡೆದಿದ್ದು, ಸಮಾಜದ ಎಲ್ಲ ಕ್ಷೇತ್ರಗಳಲ್ಲಿ ಅಭಿವೃದ್ಧಿ ಮತ್ತು ನಾವಿನ್ಯತೆಗೆ ಶಕ್ತಿ ತುಂಬುತ್ತಿದ್ದಾರೆ. ಕರ್ನಾಟಕದ ಜನ ಸದಾ ಸಂತೋ ್ ಮತ್ತು ಯಶಸ್ಸಿನಿಂದ ಕೂಡಿರಲಿ ಎಂದು, ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ, ಅವರು ಕನ್ನಡಿಗರಿಗೆ ಶುಭಾಶಯ ಕೋರಿದ್ದಾರೆ.**

<><><>

**ಬೆಂಗಳೂರಿನ ರಾಜಭವನ ಮತ್ತು ಕನ್ನಡ, ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ, ರಾಜಭವನದಲ್ಲಿ ಆಯೋಜಿಸಿದ್ದ, 69ನೇ ಕರ್ನಾಟಕ ರಾಜ್ಯೋತ್ಸವ ಸಂಭ್ರಮಾಚರಣೆಯಲ್ಲಿ, ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಅವರು, ವರ್ಚುವಲ್ ವೇದಿಕೆ ಮೂಲಕ ಪಾಲ್ಗೊಂಡು, ನಾಡಿನ ಜನತೆಗೆ ಶುಭ ಕೋರಿದರು.**

<><><>

**ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾ ೆ; ಎಲ್ಲ ಕಚೇರಿಗಳು, ಅಂಗಡಿ, ಮುಂಗಟ್ಟು ಹಾಗೂ ವಿವಿಧ ವಾಣಿಜ್ಯೋದ್ಯಮ ಸಂಸ್ಥೆಗಳ ನಾಮಫಲಕಗಳಲ್ಲಿ, ಶೇಕಡ 60ರ ್ಟು ಕನ್ನಡ ಭಾ ೆಯನ್ನು ಕಡ್ಡಾಯವಾಗಿ ಅಳವಡಿಸಲು, ಕನ್ನಡ ಭಾ ಾ ಸಮಗ್ರ ಅಭಿವೃದ್ಧಿ ಅಧಿನಿಯಮ ಜಾರಿಗೊಳಿಸಲಾಗಿದೆ ಎಂದು, ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋ ್ ಲಾಡ್ ತಿಳಿಸಿದ್ದಾರೆ.**

ಧಾರವಾಡದ ಆರ್.ಎಸ್.ಶೆಟ್ಟಿ ಕ್ರೀಡಾಂಗಣದಲ್ಲಿ, 69ನೇ ಕರ್ನಾಟಕ ರಾಜ್ಯೋತ್ಸವದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು.

<><><>

69ನೇ ರಾಜ್ಯೋತ್ಸವವನ್ನು, ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ, ರಕ್ತದಾನ ಶಿಬಿರ ಆಯೋಜಿಸುವ ಮೂಲಕ, ವಿಶಿಷ್ಟ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಲಬುರಗಿ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕಿ ಅನಿತಾ ಆರ್. ರಕ್ತದಾನ ಶಿಬಿರವನ್ನು ಉದ್ಘಾಟಿಸಿದರು. ರಕ್ತದಾನ ಜೀವದಾನ ಎಂದರು. ಕಾರಾಗೃಹದ ಅಧಿಕಾರಿ ವರ್ಗ, ಸಿಬ್ಬಂದಿ ಹಾಗೂ ಕೈಗಾರಿಕಾ ಪ್ರದೇಶಾಭಿವೃದ್ಧಿ ಆರಕ್ಷಕ ಸಿಬ್ಬಂದಿ, ಡಾಕ್ಟರ್ ಮಮತಾ ಪಾಟೀಲ ನೇತೃತ್ವದ, ಜಿಮ್ಸ್ ಆಸ್ಪತ್ರೆ ರಕ್ತ ನಿಧಿಗೆ, ರಕ್ತದಾನ ಮಾಡಿದರು.

<><><>

ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಮಠದ ಆವರಣದಲ್ಲಿ ನಡೆದ, ರಾಜ್ಯೋತ್ಸವ ಕಾರ್ಯಕ್ರಮದಲ್ಲಿ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಪಾಲ್ಗೊಂಡಿದ್ದರು.

<><><>

ವಿಜಯಪುರ ನಗರದ ಕಂದಗಲ್ ಶ್ರೀ ಹನುಮಂತ ರಾಯ ರಂಗಮಂದಿರದ ಆವರಣದಲ್ಲಿ ಜವಳಿ ಮತ್ತು ಕೈ ಮಗ್ಗ ಇಲಾಖೆಯಿಂದ ಆರಂಭಗೊಂಡ ಖಾದಿ ಉತ್ಸವ-2024 ಕ್ಕೆ ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಖಾತೆ ಸಚಿವ ಎಂ.ಬಿ ಪಾಟೀಲ್ ಚಾಲನೆ ನೀಡಿದರು. ನವೆಂಬರ್ 15 ರ ವರೆಗೆ ನಡೆಯಲಿರುವ ಈ ಮೇಳದಲ್ಲಿ ಸಾರ್ವಜನಿಕರು ಖಾದಿ ಉಡುಪು ಮತ್ತು ಗ್ರಾಮೀಣ ಉತ್ಪನ್ನಗಳ ವೈವಿಧ್ಯವನ್ನು ವೀಕ್ಷಿಸಲು, ಖರೀದಿಸಲು ಅವಕಾಶ ಕಲ್ಪಿಸಲಾಗಿದೆ.

<><><>

ಯಾದಗಿರಿ ಜಿಲ್ಲೆ, ನಾರಾಯಣಪುರ ಜಲಾಶಯದಿಂದ, ಬೀದರ್ ಜಿಲ್ಲೆ ಬಸವಕಲ್ಯಾಣದ, ಐನೂರು ಹಳ್ಳಿಗಳಿಗೆ, ಕೊಳವೆ ಮೂಲಕ ಶುದ್ಧ ಕುಡಿಯುವ ನೀರು ಒದಗಿಸುವ, ಸಾವಿರದ ಆರು ನೂರು ಕೋಟಿ ರೂಪಾಯಿ ಯೋಜನೆಗೆ, ಸಚಿವ ಸಂಪುಟ ತಾತ್ವಿಕ ಒಪ್ಪಿಗೆ ನೀಡಿದೆ ಎಂದು, ಬೀದರ ಜಿಲ್ಲೆ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಬೀದರ ನಗರದ ನೆಹರು ಕ್ರೀಡಾಂಗಣದಲ್ಲಿ, ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಶೀಘ್ರವೇ ಬೀದರ ನಿಂದ ವಿಮಾನಯಾನ ಸೇವೆ ಆರಂಭಗೊಳ್ಳಲಿದೆ. 18 ಕೋಟಿ ರೂಪಾಯಿ ವೆಚ್ಚದಲ್ಲಿ ಡಿಸೆಂಬರ್ 15ರೊಳಗೆ ಸೇವೆ ಆರಂಭಿಸಲಾಗುವುದು ಎಂದರು.

<><><>

ಬೆಂಗಳೂರು ನಗರ ವಿಶ್ವವಿದ್ಯಾಲಯದ, ಸೆಂಟ್ರಲ್ ಕಾಲೇಜು ಆವರಣದ ಗಡಿಯಾರ ಗೋಪುರದಲ್ಲಿ, ಉಪ ಕುಲಪತಿ ಪ್ರೊಫೆಸರ್ ಲಿಂಗರಾಜ ಗಾಂಧಿ, ಕನ್ನಡ ಧ್ವಜಾರೋಹಣ ನೆರವೇರಿಸಿದರು.

<><><>

ಕನ್ನಡದಲ್ಲಿ ಯುನಿಕೋಡ್ ಅಕ್ಷರ ವಿನ್ಯಾಸ, ಮೊಬೈಲ್ ಹಾಗೂ ಬ್ರೈಲ್ ಲಿಪಿಯಲ್ಲಿ ಕನ್ನಡ ಬಳಕೆ ತಂತ್ರಾಂಶಗಳನ್ನು ಅಭಿವೃದ್ಧಿ ಪಡಿಸಿ, ಕನ್ನಡ ಭಾಷೆಯ ಡಿಜಿಟಲೀಕರಣಕ್ಕೆ ನೀಲನಕ್ಷೆ ರೂಪಿಸಲಾಗಿದೆ ಎಂದು, ದಕ್ಷಿಣಕನ್ನಡ ಜಿಲ್ಲೆ ಉಸ್ತುವಾರಿ ಸಚಿವ ದಿನೇಶ ಗುಂಡೂರಾವ್ ತಿಳಿಸಿದ್ದಾರೆ.

**ದಕ್ಷಿಣಕನ್ನಡ ಜಿಲ್ಲೆ, ಮಂಗಳೂರಿನ ನೆಹರೂ ಮೈದಾನದಲ್ಲಿ, ಕನ್ನಡ ರಾಜ್ಯೋತ್ಸವಕ್ಕೆ ಚಾಲನೆ ನೀಡಿ, ಮಾತನಾಡಿದರು. ನುಡಿ ಸೇರಿದಂತೆ, ಬಹುತೇಕ ಕನ್ನಡ ಭಾಷೆಯ ತಂತ್ರಾಂಶಗಳನ್ನು, ರಾಜ್ಯ ಸರ್ಕಾರ ಬಳಕೆದಾರ ಸ್ನೇಹಿಯಾಗಿ ರೂಪಿಸಿದೆ. ಉಚಿತ ಬಳಕೆಗೆ, ಅನುವು ಮಾಡಿದೆ ಎಂದರು.**

<><><>

**ದೀಪಾವಳಿ ಹಬ್ಬದ ಅಂಗವಾಗಿ ಚಿತ್ರದುರ್ಗ ನಗರದ ನವದುರ್ಗೆಯರ ದೇವಸ್ಥಾನದಲ್ಲಿ ವಿಶೇಷ ಪೂಜೆಗಳನ್ನು ಆಯೋಜಿಸಲಾಯಿತು. ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶದ ಮನೆಗಳಲ್ಲಿ ಅಗಲಿದ ಹಿರಿಯರಿಗೆ ಗದ್ದುಗೆ ಹಾಕಿ, ಸಿಹಿ ಊಟ ನೈವೇದ್ಯ ಅರ್ಪಿಸಿ, ಹಿರಿಯರ ಹಬ್ಬವನ್ನು ಇಂದು ಆಚರಿಸಲಾಗುತ್ತಿದೆ. ದೀಪಾವಳಿ ಹಬ್ಬದ ಜೊತೆ ಹಿರಿಯರ ಹಬ್ಬ ಆಚರಣೆ ಇಲ್ಲಿನ ವಿಶೇಷತೆಯಾಗಿದೆ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ**

<><><>